ಅಧ್ಯಕ್ಷರು: ಪ್ರಸ್ತಾವನೆ ಮಂಡಿಸಲಾಯಿತು

ಈಗ ಪ್ರಸ್ತಾವನೆ ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ.

2011ನೇ ಸಾಲಿನ ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು " ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಸಚಿವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು

ಶ್ರೀ ಜೆ. ಕೃಷ್ಣ ಪಾಲೆಮಾರ್ (ಬಂದರು ಮತ್ತು ಒಳನಾಡು ಜಲಸಾರಿಗೆ, ಜೀವಿಶಾಸ್ತ್ರ ಮತ್ತು ಪರಿಸರ, ಮೀನುಗಾರಿಕೆ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

(ಆ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2011 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಸ್. ಸುರೇಶ್ ಕುಮಾರ್: (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) (ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಪರವಾಗಿ): ಮಾನ್ಯ ಉಪಾಧ್ಯಕ್ಷರೆ, ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2011ನೇ ಸಾಲಿನ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಉಪಾಧ್ಯಕ್ಷರು: ಮಾನ್ಯ ಮಂತ್ರಿಯವರೆ, ವಿವರಿಸಿ.

ಶ್ರೀ ಎಸ್. ಸುರೇಶ್ ಕುಮಾರ್: ಇದೊಂದು ಮೈನರ್ ಬಿಲ್. ವಿಶ್ವೇಶ್ವರಯ್ಯ Technological University ಯಲ್ಲಿ vice-Chancellor ಮತ್ತು ಕೆಲವು ಸಿಬ್ಬಂದಿ ಮೇಲೆ ದೂರು ಬಂದರೆ ವಿಚಾರಣಾಧಿಕಾರಿಗಳನ್ನು ನೇಮಿಸಿ ವಿಚಾರಣೆ ಮಾಡುವುದಕ್ಕೆ ಅಧಿಕಾರವಿರಲಿಲ್ಲ. ಆ ಕೊರತೆಯನ್ನು ನೀಗಿಸುವುದಕ್ಕೆ ವಿಚಾರಣಾಧಿಕಾರಿ ನೇಮಿಸುವುದು, ಬಂದ ವರದಿಯನ್ನು ಕುಲಾಧಿಪತಿಗಳಿಗೆ ಅಂದರೆ ರಾಜ್ಯಪಾಲರಿಗೆ ಒಪ್ಪಿಸಿ ಅವರು ಕ್ರಮ ತೆಗೆದುಕೊಳ್ಳುವುದಕ್ಕೆ ಅವಕಾಶ ಕಲ್ಪಿಸುತ್ತಿದೇವೆ. ಅದಕ್ಕೋಸ್ಕರ ಅಗತ್ಯವಾದ ತಿದ್ದುಪಡಿಗೆ ತಾವು ಅನುಮೋದನೆ ಕೊಡಬೇಕೆಂದು ಸದನವನ್ನು ಕೋರುತ್ತಿದ್ದೇನೆ.

ಶ್ರೀ ಟಿ.ಬಿ. ಜಯಚಂದ್ರ (ತಿರಾ): ಮಾನ್ಯ ಉಪಾಧ್ಯಕ್ಷರೆ, ತಾವು ಹೇಳಿದ ಹಾಗೆ ಇದೊಂದು minor bill ಆಗಿರಬಹುದು. ಆದರೆ, Technological University vice-Chancellor ಮೇಲೆ ಕ್ರಮ ತೆಗೆದುಕೊಳ್ಳಬೇಕಾದರೆ ಅಧಿಕಾರವನ್ನು Act ನಲ್ಲಿ ಕೊಡುತ್ತಿದ್ದೇವೆ ನಿಜ. ಒಂದು ಪಕ್ಷ vice-Chancellor ತಪ್ಪು ಮಾಡುವಂಥ ಪ್ರಶ್ನೆ ಬಂದಾಗ ತಾವು ಇಲ್ಲಿ ಹೇಳುತ್ತಿರುವುದು High Court Judge, sitting judge or Former Judge of the High Court or Supreme Court. ಆದರೆ, ಆಂಥ ಪ್ರಶ್ನೆ ಬಂದಾಗ Judge ಅನ್ನು appoint ಮಾಡುವವರು ಸರ್ಕಾರವಾದರೂ ಕೂಡ ಯಾವ ರೀತಿ ಮಾಡುತ್ತೀರಿ? ನಿಮಗೆ ಬೇಕಾಗಿರುವ Judge ಅನ್ನು ನೇಮಕ ಮಾಡುವುದು ಅವಕಾಶವಿರುವುದರಿಂದ ಅದು ದುರುಪಯೋಗವಾಗುವುದಕ್ಕೆ ಸಾಧ್ಯವಿರುತ್ತದೆ. ಅದಕ್ಕೆ ಒಂದು ಸಣ್ಣ amendment ತಂದರೆ ಒಳ್ಳೆಯದೆಂದು ಅನಿಸುತ್ತದೆ. ತಾವು, 4.B 'For the purpose of holding an enquiry under this Section, the State Government shall appoint a person who is or has been a Judge of the High Court or Supreme Court' ಅಲ್ಲಿ 'in consultation with the chief Justice of High Court' ಎಂದು ಹೇಳಿ. ಯಾವ Judge enquiry ಮಾಡಬೇಕೆಂಬುದನ್ನು chief Justice ರವರಿಗೇ ಬಿಡೋಣ. ಆ ರೀತಿಯಾಗಿ ಬಿಟ್ಟರೆ ಬಹಳ ಒಳ್ಳೆಯದಾಗುತ್ತದೆ. ಈ amendment ತರುವುದು ಸೂಕ್ತ. ಏಕೆಂದರೆ, ನಿನ್ನೆ ನಿಮಗೆ ಗೊತ್ತಾಗಿದೆ. ಲೋಕಾಯುಕ್ತರ appoint ಮಾಡಬೇಕಾದ ಸಂದರ್ಭದಲ್ಲಿ ನಾವು ಯಾರೋ ಒಬ್ಬಿಬ್ಬರನ್ನು consult ಮಾಡುವುದು ಆದರೆ, ಬಿಹಾರದಲ್ಲಿ ನಿನ್ನೆ ಮಂಡನೆಯಾಗಿರುವ ಬಿಲ್‌ನಲ್ಲಿ ಅಲ್ಲಿ Search Committee ಮಾಡಿದ್ದಾರೆ. ಆ

Search Committee ಯಲ್ಲಿ, they will be given three months' time and in the meanwhile, they will identify a person of integrity and they can be appointed. ಆ ರೀತಿಯಾಗಿ Search Committee ಎನ್ನುವ rider ಇರುತ್ತದಲ್ಲಾ ಆ Search Committee ಬೇಡ, atleast, in consultation with the Chief Justice of High Court ಎನ್ನುವ ಮಾತನ್ನು ಹೇಳಿದರೆ ಬಹಳ ಒಳ್ಳೆಯದಾಗುತ್ತದೆ. ನಾಳೆ ಯಾರೂ ಹಸ್ತಕ್ಷೇಪ ಮಾಡುವುದಕ್ಕೆ ಸಾಧ್ಯವಾಗುವುದಿಲ್ಲ. ಏಕೆಂದರೆ ಮಂತ್ರಿಯಾಗಿರುವವರು Pro-Chancellor ಆಗಿರುತ್ತಾರೆ. ಎಲ್ಲೋ ಒಂದು ಕಡೆ vice-Chancellor ಮೇಲೆ ಒತ್ತಡ ಬೀಳದೇ ಇರಬೇಕಾದ ಸಂದರ್ಭದಲ್ಲಿ ಯಾವುದೇ enquiry ಕೂಡ ನಿಷ್ಪಕ್ಷಪಾತವಾಗಿ ಆಗುವಂಥ ಪ್ರಶ್ನೆ ಬಂದ ಸಂದರ್ಭದಲ್ಲಿ ಈ ತರಹ rider ಇರುವಂಥದ್ದು ಬೇಕು. ಯಾರು enquiry ಮಾಡಬೇಕೆನ್ನುವುದನ್ನು chief Justice decide ಮಾಡಬಹುದೆಂದು ಇಟ್ಟರೆ ಒಳ್ಳೆಯದಾಗುತ್ತದೆ. ಅದನ್ನು ಮಾಡಿ.

ಶ್ರೀ ಎಸ್. ಸುರೇಶ್ ಕುಮಾರ್: ಇದು valid point, ನಾವು ವಿಚಾರಣೆಗೆ ಒಬ್ಬ ವಿಚಾರಣಾಧಿಕಾರಿಯನ್ನು ನೇಮಕ ಮಾಡಿದರೂ ಕೂಡ High Court, Supreme Court or Retired Judge, ultimately ಕುಲಾಧಿಪತಿಗಳಾದ ರಾಜ್ಯಪಾಲರು decision ತೆಗೆದುಕೊಳ್ಳಬೇಕು. ಅವರಿಗೆ ನಾವು ಒಪ್ಪಿಸುವುದು. ಅವರು ಏನು ಸಲಹೆ ಕೊಡುತ್ತಾರೆ ಆ ಸಲಹೆ ಮೇಲೆ ಕ್ರಮ ತೆಗೆದುಕೊಳ್ಳುವುದು. ಈ ರೀತಿ ಕೊರತೆ ಇದ್ದುದರಿಂದ ಮೊದಲನೇ ಹಂತವಾಗಿ ಇದನ್ನು ತಂದಿದ್ದೇವೆ. ತಮ್ಮ ಸಲಹೆ ಏನಿದೆ ಅದನ್ನು ಪರಿಶೀಲಿಸಿ ಮುಂದೆ ಮಾಡೋಣ.

ಉಪಾಧ್ಯಕ್ಷರು: ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2011 ನೇ ಸಾಲಿನ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ

ಖಂಡ 2 ರಿಂದ 4

ಉಪಾಧ್ಯಕ್ಷರು: 2 ರಿಂದ 4ರವರೆಗಿನ ಖಂಡಗಳು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

2 ರಿಂದ 4ರವರೆಗಿನ ಖಂಡಗಳು ವಿಧೇಯಕದ ಅಂಗವಾದವು.

ಮೊದಲನೆ ಖಂಡ, ಹೆಸರು ಮತ್ತು ಅವರತಣಿಕೆ

ಉಪಾಧ್ಯಕ್ಷರು: ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವರತರಣಿಕೆ ವಿಧೇಯಕದ ಅಂಗವಾಗಿದೆ.

ಪ್ರಸ್ತಾವದ ಅಂಗೀಕಾರ

ಉಪಾಧ್ಯಕ್ಷರು: ಮಾನ್ಯ ಸಚಿವರು ಅಂಗೀಕಾರ ಪ್ರಸ್ತಾವವನ್ನು ಮಂಡಿಸಬಹುದು.

ಶ್ರೀ ಎಸ್. ಸುರೇಶ್ ಕುಮಾರ್: (ನಗರಾಭಿವೃದ್ಧಿ, ಪೌರಾಡಳಿತ, ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಬೆಂಗಳೂರು ಜಲಮಂಡಳಿ ಸಚಿವರು) (ಮಾನ್ಯ ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಪರವಾಗಿ) ಮಾನ್ಯ ಉಪಾಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2011ನೇ ಸಾಲಿನ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2011ನೇ ಸಾಲಿನ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

2) ಮೈಸೂರು (ಧಾರ್ಮಿಕ ಮತ್ತು ಧರ್ಮಾದಾಯ) ಇನಾಮುಗಳು ರದ್ದತಿ (ಕರ್ನಾಟಕ ತಿದ್ದುಪಡಿ) ವಿಧೇಯಕ 2011

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಸ್. ಸುರೇಶ್ ಕುಮಾರ್: (ನಗರಾಭಿವೃದ್ಧಿ, ಪೌರಾಡಳಿತ, ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಬೆಂಗಳೂರು ಜಲಮಂಡಳಿ ಸಚಿವರು) (ಮಾನ್ಯ ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಪರವಾಗಿ): ಮಾನ್ಯ ಉಪಾಧ್ಯಕ್ಷರೆ, 2011ನೇ ಸಾಲಿನ